ಆ) ಕಾಲೇಜು ಕಟ್ಟಡಕ್ಕೆ ಸೂಕ್ತವಾದ ಜಮೀನು ಗುರುತಿಸಲಾಗಿದ್ದು, ಜಮೀನನ್ನು ಪಡೆಯುವ ಕ್ರಮವನ್ನು ಚುರುಕುಗೊಳಿಸಲಾಗುವುದೇ?

ಇ) ಬೀದರ್‌ನ ಪಶುವೈದ್ಯಕೀಯ ವಿಶ್ವವಿದ್ಯಾಲಯದ ಪೂರ್ವಭಾವಿ ಕಾರ್ಯಗಳನ್ನು ಚುರುಕುಗೊಳಿಸಲು ಸರ್ಕಾರ ಕೈಗೊಂಡ ಕ್ರಮಗಳೇನು?

ಶ್ರೀ ರೇವೂನಾಯಕ್ ಬೆಳಮಗಿ (ಪಶುಸಂಗೋಪನಾ ಸಚಿವರು) :

ಅ) ಬಂದಿದೆ. ಈ ಬಗ್ಗೆ ನಿಗದಿ ಪಡಿಸಿದ ಜಮೀನು ಕರ್ನಾಟಕ ಪಶುವೈದ್ಯಕೀಯ, ಪಶು ಹಾಗೂ ಮೀನುಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯಕ್ಕೆ ಹಸ್ತಾಂತರಗೊಂಡ ನಂತರ ಕಟ್ಟಡ ಕಾಮಗಾರಿಯನ್ನು ಕೈಗೊಂಡು ಕಾಲೇಜು ಕಟ್ಟಡ ಒದಗಿಸಲಾಗುವುದು.

ಆ) ಜಮೀನನ್ನು ಪಡೆಯಲು ಸೂಕ್ತ ಕ್ರಮ ಕೈಗೊಳ್ಳಲಾಗುತ್ತಿದೆ.

ಇ) ಬೀದರ್ ಪಶುವೈದ್ಯಕೀಯ ವಿಶ್ವವಿದ್ಯಾಲಯದ ಪೂರ್ವಬಾವಿ ಕಾರ್ಯಗಳನ್ನು ಚುರುಕುಗೊಳಿಸಲು ಅಗತ್ಯವಾದ ಎಲ್ಲ ಕ್ರಮಗಳನ್ನು ಕೈಗೊಳ್ಳಲಾಗಿದೆ.

792 ಶ್ರೀ ಬೆಳ್ಳುಬ್ಬಿ ಸಂಗಪ್ಪ ಕಲ್ಲಪ್ಪ (ಬಸವನಬಾಗೇವಾಡಿ) : ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ವಿಜಾಪುರ ಜಿಲ್ಲೆಯ ಬಸವನಬಾಗೇವಾಡಿ ಮತ ಕ್ಷೇತ್ರದಲ್ಲಿ ಪ್ರೌಢಶಾಲೆ ಮತ್ತು ಪದವಿ ಪೂರ್ವ ಕಾಲೇಜುಗಳನ್ನು ಹೊಸದಾಗಿ ಸ್ಥಾಪಿಸುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮವೇನು?

ಶ್ರೀ ಕಾಗೇರಿ ವಿಶ್ವೇಶ್ವರ ಹೆಗಡೆ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) :

ಅ) ಹೌದು.

ಆ) ಕಳೆದ ವರ್ಷಗಳಲ್ಲಿ ಪ್ರಾರಂಭಿಸಲಾದ ಶಾಲಾ/ಕಾಲೇಜುಗಳಿಗೆ ಮೂಲಭೂತ ಸೌಕರ್ಯಗಳನ್ನು ಒದಗಿಸಿದ ನಂತರ ಹೊಸ ಶಾಲಾ/ಕಾಲೇಜುಗಳನ್ನು ಪ್ರಾರಂಭಿಸುವ ಬಗ್ಗೆ ಪರಿಶೀಲಿಸಲಾಗುವುದು.